# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು–560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 20.08.2011**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಬೃಹತ್ ನೀರುಗಾಲುವೆ ವಿಭಾಗದಿಂದ ದಿನಾಂಕ: 19.08.2011 ರಂದು ಮೈಸೂರು ರಸ್ತೆಯ ಗಾಳಿ ಆಂಜನೇಯ ದೇವಸ್ಥಾನದ ಮುಂಭಾಗದಲ್ಲಿ ಬೃಹತ್ ನೀರುಗಾಲುವೆಯ ಪ್ರದೇಶವನ್ನು ಒತ್ತುವರಿ ಮಾಡಿಕೊಂಡ ಒಟ್ಟು 7 ಕಟ್ಟಡಗಳ ತೆರವು ಕಾರ್ಯಾಚರಣೆಯನ್ನು ಪ್ರಾರಂಭಿಸಲಾಗಿದ್ದು, ಮಧ್ಯಾಹ್ನ 4.00 ಗಂಟೆಯವರೆಗೂ 3 ಕಟ್ಟಡಗಳನ್ನು ತೆರವುಗೊಳಿಸಲಾಗಿರುತ್ತದೆ ಎಂದು ಕಾರ್ಯಪಾಲಕ ಅಭಿಯಂತರರು (ಬೃಹತ್ ನೀರುಗಾಲುವೆ) ವಿಭಾಗ ರವರು ತಿಳಿಸಿದ್ದಾರೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 20.08.2011**

ಪ್ರತಿ ವರ್ಷವೂ ರಂಜಾನ್ ಹಬ್ಬದ ಆಚರಣೆಯ ಸಂದರ್ಭದಲ್ಲಿ ಗೋವು, ದನಕರುಗಳು, ಒಂಟೆಗಳಂತಹ ಪ್ರಾಣಿಗಳನ್ನು ಸಾಮೂಹಿಕವಾಗಿ ಬಲಿ ನೀಡಲಾಗುತ್ತಿದೆ. ಕರ್ನಾಟಕ ಉಚ್ಛ ನ್ಯಾಯಾಲಯ ರಿಟ್ ಅರ್ಜಿ ಸಂಖ್ಯೆ: 1330/2005 ರಲ್ಲಿ ಹೊರಡಿಸಿರುವ ಆದೇಶದಂತೆ ಕರ್ನಾಟಕ ಪ್ರಾಣಿ ಬಲಿ ನಿಷೇಧ ಕಾಯ್ದೆ 1959 ಮತ್ತು ಕರ್ನಾಟಕ ಪ್ರಾಣಿ ಬಲಿ ನಿಷೇಧ ನಿಯಮಗಳು 1963ರಲ್ಲಿ ಉಲ್ಲೇಖಿಸಿದಂತೆ ಪ್ರಾಣಿಗಳನ್ನು ಬಲಿ ನೀಡುತ್ತಿರುವವರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು ಎಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರಾದ ಶ್ರೀ ಸಿದ್ದಯ್ಯ ರವರು ತಿಳಿಸಿದ್ದಾರೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** ದಿನಾಂಕ: 20.08.2011

ಪ್ರತಿ ವರ್ಷ ಗಣೇಶ ಚತುರ್ಥಿ ಸಂದರ್ಭದಲ್ಲಿ ಸಾರ್ವಜನಿಕರು ವಿವಿಧ ಬಣ್ಣಗಳಿಂದ ಲೇಪನ ಮಾಡಿದ ಗಣೇಶನ ವಿಗ್ರಹಗಳು ಪ್ರತಿಷ್ಠಾಪಿಸಿ ಪೂಜಿಸುವ ವಾಡಿಕೆ ಇದ್ದು, ನಂತರ ವಿಗ್ರಹಗಳನ್ನು ಕೆರೆ, ಬಾವಿಗಳಲ್ಲಿ ವಿಸರ್ಜಿಸುತ್ತಿರುವುದು ಸಾಮಾನ್ಯ ಸಂಗತಿಯಾಗಿದೆ. ಆದರೆ ಇದರಿಂದ ಪರಿಸರ ಮಾಲಿನ್ಯಗೊಂಡು ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮವಾಗುತ್ತಿದೆ.

ಈ ಹಿನ್ನೆಲೆಯಲ್ಲಿ ಇಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಉಪ ಮಹಾಪೌರರಾದ ಶ್ರೀ ಎಸ್. ಹರೀಶ್ ರವರು ನಗರದ ವಿವಿಧ ಸ್ಥಳಗಳಲ್ಲಿ ತಯಾರಾಗುತ್ತಿರುವ ಗಣೇಶನ ವಿಗ್ರಹಗಳ ಘಟಕಗಳಾದ ಆರ್.ವಿ. ರಸ್ತೆ ಹಾಗೂ ಪಾಟರಿಟೌನ್ ಪ್ರದೇಶಕ್ಕೆ ಭೇಟಿ ನೀಡಿ, ವಿಗ್ರಹ ತಯಾರಕರಿಗೆ ಬಣ್ಣ ಲೇಪಿತ ಗಣೇಶ ವಿಗ್ರಹಗಳಿಂದ ಆಗುವ ಪರಿಸರ ಮಾಲಿನ್ಯದ ಕುರಿತು ಅರಿವು ಮೂಡಿಸಿದರು. ಅದಕ್ಕೆ ಸ್ಪಂಧಿಸಿದ ವಿಗ್ರಹ ತಯಾರಕರು ಇನ್ನು ಮುಂದೆ ಬಣ್ಣ ಲೇಪಿತ ವಿಗ್ರಹಗಳ ಬದಲಾಗಿ ಬಣ್ಣ ರಹಿತ ವಿಗ್ರಹಗಳನ್ನು ತಯಾರಿಸುವುದಾಗಿ ಸಮ್ಮತಿಸಿದರು.

ಬಣ್ಣ ಲೇಪಿತ ಗಣೇಶನ ವಿಗ್ರಹಗಳಲ್ಲಿ ಸೀಸ (Lead) ಹೊಂದಿರುತ್ತದೆ ಎಂದು ಇತ್ತೀಚಿನ ಸಂಶೋಧನೆಯಿಂದ ಗುರುತಿಸಲ್ಪಟ್ಟಿರುತ್ತದೆ. ಹಾಗೂ ಗಣೇಶನ ಅಲಂಕಾರಕ್ಕಾಗಿ ಬಳಸುತ್ತಿರುವ ಥರ್ಮಾಕೂಲ್, ಪ್ಲಾಸ್ಟಿಕ್ ಪೇಪರ್‌ಗಳ ಬಳಕೆಯಿಂದ ಸಹ ಪರಿಸರ ಮಾಲಿನ್ಯಗೊಳ್ಳುತ್ತಿದೆ. ಆದ್ದರಿಂದ ಇನ್ನು ಮುಂದೆ ಸಾರ್ವಜನಿಕರು ಬಣ್ಣರಹಿತ ಗಣೇಶನ ಮೂರ್ತಿಗಳನ್ನು ಪ್ರತಿಷ್ಠಾಪಿಸಿ ನೈಸರ್ಗಿಕ ಹೂಗಳು, ಎಲೆಗಳು, ಹಣ್ಣುಗಳನ್ನು ಉಪಯೋಗಿಸಿ ಪೂಜಿಸುವುದರಿಂದ ಪರಿಸರ ಮಾಲಿನ್ಯವಾಗುವುದನ್ನು ತಡೆಯಬಹುದಾಗಿರುತ್ತದೆ ಎಂದು ತಿಳಿಸಿದ ಉಪ ಮಹಾಪೌರರು ಪಾಲಿಕೆಯ ವತಿಯಿಂದ ನಗರದ ವಿವಿಧ ಸ್ಥಳಗಳಲ್ಲಿರುವ ಕೆರೆಗಳಲ್ಲಿ ಕಲ್ಯಾಣಿಗಳನ್ನು ಹಾಗೂ ಮೊಬೈಲ್ ಟ್ಯಾಂಕ್‌ಗಳನ್ನು ಸ್ಥಾಪಿಸಿ, ಸಾರ್ವಜನಿಕರಿಗೆ ಗಣೇಶನ ವಿಗ್ರಹಗಳನ್ನು ವಿಸರ್ಜಿಸಲು ಅವಕಾಶ ಕಲ್ಪಿಸಲಾಗಿದೆ. ಆದ್ದರಿಂದ ಈ ನಿಗಧಿಪಡಿಸಿದ ಸ್ಥಳಗಳಲ್ಲಿ ಮಾತ್ರ ಗಣೇಶನ ವಿಗ್ರಹಗಳನ್ನು ವಿಸರ್ಜಿಸಲು ಸಾರ್ವಜನಿಕರಲ್ಲಿ ಮನವಿ ಮಾಡಿದರು.

**ಸಾರ್ವಜನಿಕ ಸಂಪರ್ಕಾಧಿಕಾರಿ**

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 20.08.2011**

ವಸಂತನಗರದ ಮಿಲ್ಲರ್ಸ್ ರಸ್ತೆ (ಬಸವೇಶ್ವರ ರಸ್ತೆ) ಅಂಬೇಡ್ಕರ್ ಭವನದ ಎದುರುಗಡೆ ಜಲಮಂಡಳಿಯಿಂದ ಅಳವಡಿಸಲಾದ ಕುಡಿಯುವ ನೀರಿನ ಪೈಪ್‌ಗಳನ್ನು ಬದಲಾಯಿಸುವ ಮತ್ತು ಸೇತುವೆ ದುರಸ್ಥಿ ಕಾರ್ಯ ಅರ್ಧ ಭಾಗ ಪ್ರಗತಿಯಲ್ಲಿತ್ತು. ನಿನ್ನೆ ಮಧ್ಯರಾತ್ರಿ ಉಳಿದ ಅರ್ಧ ಭಾಗ ರಸ್ತೆ ಕುಸಿದು ಅಲ್ಲಿಯೂ ಕೂಡಾ ಅಳವಡಿಸಲಾದ ಕುಡಿಯುವ ನೀರಿನ ಪೈಪ್‌ಗಳು ಹೊಡೆದು ಹೋಗಿರುವ ಹಿನ್ನೆಲೆಯಲ್ಲಿ ಈ ರಸ್ತೆಯಲ್ಲಿ ಸಂಚಾರದಟ್ಟಣೆಯಾಗಿ ವಾಹನ ಸಂಚಾರಕ್ಕೆ ತುಂಬಾ ಅನಾನುಕೂಲವಾಗಿದ್ದು ಹಾಗೂ ತಿಮ್ಮಯ್ಯ ರಸ್ತೆ ಮಳೆಯಿಂದ ಸಂಪೂರ್ಣವಾಗಿ ಹಾಳಾಗಿ ವಾಹನ ಸಂಚಾರಕ್ಕೆ ಅಡ್ಡಿಯಾಗಿರುವ ಹಿನ್ನೆಲೆಯಲ್ಲಿ ಪಾಲಿಕೆಯ ಆಯುಕ್ತರಾದ ಶ್ರೀ ಸಿದ್ದಯ್ಯ ರವರು ಮತ್ತು ಶ್ರೀ ಪ್ರವೀಣ್ ಸೂದ್, ಉಪ ಪೊಲೀಸ್ ಆಯುಕ್ತರು (ಸಂಚಾರ) ರವರು ಇಂದು ಸಂಜೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಈ ಎರಡು ರಸ್ತೆಯಿಂದ ವಾಹನ ಸಂಚಾರಕ್ಕೆ ಅನಾನುಕೂಲ ಉಂಟಾಗಿರುವುದರಿಂದ ಕೂಡಲೇ ಜಲಮಂಡಳಿಯಿಂದ ಕುಡಿಯುವ ನೀರಿನ ಪೈಪ್‌ಗಳನ್ನು ಅಳವಡಿಸುತ್ತಿರುವ ಕಾರ್ಯ ಪೂರ್ಣಗೊಳಿಸಲು ಜಲಮಂಡಳಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ತಿಮ್ಮಯ್ಯ ರಸ್ತೆ, ಮಿಲ್ಲರ್ಸ್ ಟ್ಯಾಂಕ್ ಬಂಡ್ ರಸ್ತೆಗಳಲ್ಲಿ ಈ ಕೂಡಲೇ ಎರಡು ದಿನಗಳಲ್ಲಿ ಈ ಎರಡು ರಸ್ತೆಗಳಿಗೆ ಡಾಂಬರು ಹಾಕಲು ಮುಖ್ಯ ಅಭಿಯಂತರರು (ಬೃಹತ್ ರಸ್ತೆಗಳು) ರವರಿಗೆ ಸೂಚನೆ ನೀಡಿ, ನಾಳೆ ಬೆಳಿಗ್ಗೆಯಿಂದಲೇ ಕಾರ್ಯಾರಂಭ ಮಾಡಲು ತಿಳಿಸಿದರು. ಎರಡು ದಿನಗಳಲ್ಲಿ ಈ ರಸ್ತೆಗಳಲ್ಲಿ ವಾಹನ ಸಂಚಾರ ಸುಗಮಗೊಳ್ಳಲಿದೆ ಎಂದು ಪಾಲಿಕೆ ಆಯುಕ್ತರಾದ ಶ್ರೀ ಸಿದ್ದಯ್ಯ ರವರು ತಿಳಿಸಿದರು.

**ಸಾರ್ವಜನಿಕ ಸಂಪರ್ಕಾಧಿಕಾರಿ**